# Bangalore
# Regional News
# 12.02.2025 / 2.30 p.m.
## ಆಕಾಶವಾಣಿ ಬೆಂಗಳೂರು
## ಪ್ರದೇಶ ಸಮಾಚಾರ

ಮುಖ್ಯಾಂಶಗಳು

1. ಜಾಗತಿಕ ಹೂಡಿಕೆದಾರರ ಸಮಾವೇಶ; ಭವಿಷ್ಯದ ಆವಿಷ್ಕಾರ ಮೇಳಕ್ಕೆ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಚಾಲನೆ
2. ಮುಖ್ಯಮಂತ್ರಿ ಸಿದ್ದರಾಮಯ್ಯ ಭೇಟಿಯಾದ ಜಪಾನ್, ಇಟಲಿ ರಾಯಭಾರಿಗಳು; ಬಂಡವಾಳ ಹೂಡಿಕೆ ಕುರಿತಂತೆ ಚರ್ಚೆ
3. ಏರೋ ಇಂಡಿಯಾ 2025; ರಕ್ಷಣಾ ಕ್ಷೇತ್ರಕ್ಕೆ ಸಂಬಂಧಿಸಿದಂತೆ ಅಮೆರಿಕಾ ಜೊತೆ ನಿಯೋಗ ಮಟ್ಟದ ಮಾತುಕತೆ
4. ಬ್ಯಾಡಗಿ ಕೃಷಿ ಉತ್ಪನ್ನ ಮಾರುಕಟ್ಟೆಗೆ ಉಪಲೋಕಾಯುಕ್ತ ಬಿ.ವೀರಪ್ಪ ಭೇಟಿ; ತೂಕದಲ್ಲಿ ವಂಚನೆ ವಿರುದ್ಧ ಸ್ವಯಂ ಪ್ರೇರಿತ ಪ್ರಕರಣ ದಾಖಲು

****************

ಜಾಗತಿಕ ಹೂಡಿಕೆದಾರರ ಸಮಾವೇಶದಲ್ಲಿ ಇಂದು 'ಫ್ಯೂಚರ್ ಆಫ್ ಇನ್ನೋವೇಶನ್' ಎಕ್ಸ್‌–ಪೋಗೆ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಮತ್ತು ಬೃಹತ್ ಹಾಗೂ ಮಧ್ಯಮ ಕೈಗಾರಿಕಾ ಸಚಿವ ಎಂ.ಬಿ.ಪಾಟೀಲ್ ಚಾಲನೆ ನೀಡಿದರು.

ಬಳಿಕ ಉಭಯ ಸಚಿವರು, ಕರ್ನಾಟಕ ಪೆವಿಲಿಯನ್, ಟೊಯೋಟಾ, ಎಂಬೆಸಿ ಗ್ರೂಪ್, ರಾಜ್ಯ ಪ್ರವಾಸೋದ್ಯಮ, ಡ್ರೋನ್ ತಂತ್ರಜ್ಞಾನದ ವೈಶಿಷ್ಟ್ಯಪೂರ್ಣ ಮಜಲುಗಳನ್ನು ಕುತೂಹಲದಿಂದ ವೀಕ್ಷಿಸಿ, ಅವುಗಳ ಬಗ್ಗೆ ಮಾಹಿತಿ ಪಡೆದುಕೊಂಡರು.

ಅಗ್ರಿ–ಟೆಕ್ ಮತ್ತು ವೈದ್ಯಕೀಯ ಕ್ಷೇತ್ರದಲ್ಲಿ ರೋಗಪತ್ತೆ ಮತ್ತು ಚಿಕಿತ್ಸೆಗಳನ್ನು ಸುಲಭವಾಗಿಸುವ ಆರೋಗ್ಯಸೇವೆಗಳ ತಂತ್ರಜ್ಞಾನಗಳ ಬಗ್ಗೆಯೂ ಅವರು ಮಾಹಿತಿ ಪಡೆದುಕೊಂಡರು.

ಪ್ರದರ್ಶನ ಕುರಿತು ಮಾತನಾಡಿದ ಪ್ರತಿಕ್ರಿಯಿಸಿದ ಸಚಿವ ಎಂ ಬಿ ಪಾಟೀಲ್, ಎಕ್ಸ್‌ಪೊದಲ್ಲಿ ಸುಮಾರು 40ಕ್ಕೂ ಹೆಚ್ಚು ಕಂಪನಿಗಳು ಭಾಗವಹಿಸಿವೆ. ಈ ಪೈಕಿ ಜಾಗತಿಕ ಮಟ್ಟದ ಕಂಪನಿಗಳು ಮತ್ತು ಪ್ರವರ್ಧಮಾನಕ್ಕೆ ಬರುತ್ತಿರುವ ನವೋದ್ಯಮಗಳೆರಡೂ ಇವೆ. ಡ್ರೋನ್, ಬಾಹ್ಯಾಕಾಶ, ಕೃಷಿ, ಆರೋಗ್ಯ, ಉತ್ಪಾದನಾ ವಲಯ, ವೈಮಾಂತರಿಕ್ಷ, ರಕ್ಷಣೆ ಮುಂತಾದ ಕ್ಷೇತ್ರಗಳಲ್ಲಿ ಮುಂಚೂಣಿಗೆ ಬರುತ್ತಿರುವ ಆಧುನಿಕ ತಂತ್ರಜ್ಞಾನಕ್ಕೆ ಒತ್ತು ನೀಡಲಾಗಿದೆ ಎಂದು ತಿಳಿಸಿದರು.

****************

ಜಾಗತಿಕ ಹೂಡಿಕದಾರರ ಸಮಾವೇಶದಲ್ಲಿ ಇಂದು 'ಸೆಮಿಕಂಡಕ್ಟರ್ ಕ್ರಾಂತಿಯಲ್ಲಿ ಭಾರತದ ನಾಯಕತ್ವದ ಸರದಿ' ಕುರಿತು ನಡೆದ ಗೋಷ್ಠಿ ನಡೆಯಿತು. ಗೋಷ್ಠಿಯಲ್ಲಿ ಉದ್ಯಮ ಪರಿಣತರಾದ ಟೆಕ್ಸಾಸ್ ಇನ್ಸ್ಟ್ರುಮೆಂಟ್ಸ್ ಸಿಇಒ ಸಂತೋಷಕುಮಾರ್, ಎನ್‌ಎಕ್ಸ್ ಪಿ ಸೆಮಿಕಂಡಕ್ಟರ್ಸ್ ಉಪಾಧ್ಯಕ್ಷ ಹಿತೇಂದ್ರ ಗಾರ್ಗ್ ಮತ್ತು ಗ್ಲೋಬಲ್ ಫ್ಯಾಬ್ ಎಂಜಿನಿಯರಿಂಗ್ ಸೊಲ್ಯೂಷನ್ಸ್ ಕಂಪನಿಯ ವ್ಯವಸ್ಥಾಪಕ ನಿರ್ದೇಶಕ ಜಿತೇಂದ್ರ ಛಡ್ಡಾ ಭಾಗವಹಿಸಿದ್ದರು.

ಸಂತೋಷಕುಮಾರ್ ಮಾತನಾಡಿ, 'ಸೆಮಿಕಂಡಕ್ಟರ್ ಕ್ಷೇತ್ರದಲ್ಲಿ ಮುಂದಿನ ಹತ್ತು ವರ್ಷಗಳು ಭಾರತದ್ದಾಗಿವೆ. ಈ ಅವಧಿಯಲ್ಲಿ ಈ ಕ್ಷೇತ್ರದ ಈಗಿನ 40 ಬಿಲಿಯನ್ ಡಾಲರ್ ವಹಿವಾಟು 400 ಬಿಲಿಯನ್ ಡಾಲರ್ ಮೀರಲಿದೆ. ಆದರೆ, ನಮ್ಮ ಶಿಕ್ಷಣ ಕ್ಷೇತ್ರದಲ್ಲಿ ಗುಣಮಟ್ಟದ ಬೋಧಕರು, ಸಂಶೋಧನೆ ಮತ್ತು ಪ್ರಾಯೋಗಿಕ ಕಲಿಕೆ ಮೂರರ ಕಡೆಗೂ ಆದ್ಯ ಗಮನ ಕೊಡಬೇಕು ಎಂದು ತಿಳಿಸಿದರು.

ಜಿತೇಂದ್ರ ಛಡ್ಡಾ ಮಾತನಾಡಿ, ಸೆಮಿಕಂಡಕ್ಟರ್ ಕ್ಷೇತ್ರದ ಚಿಪ್ ವಿನ್ಯಾಸದಲ್ಲಿ ಭಾರತದ ಪಾಲು ಶೇಕಡ 25ರಷ್ಟಿದೆ. ಆದರೆ, ಉತ್ಪಾದನೆಯಲ್ಲಿ ನಾವು ಹಿಂದುಳಿದಿದ್ದೇವೆ. ಇನ್ನು 5–10 ವರ್ಷಗಳಲ್ಲಿ ಕೃತಕ ಬುದ್ಧಿಮತ್ತೆ ಎಲ್ಲಾ ಕ್ಷೇತ್ರಗಳನ್ನೂ ಆವರಿಸಿಕೊಳ್ಳಲಿದೆ ಎಂದು ಅಭಿಪ್ರಾಯಪಟ್ಟರು.

ಹಿತೇಶ್ ಗಾರ್ಗ್ ಮಾತನಾಡಿ, ಈಗ ಬೆಂಗಳೂರಿನಲ್ಲೇ ನ್ಯಾನೊ ಮೀಟರ್ ಲೆಕ್ಕದಲ್ಲಿ ಚಿಪ್ ವಿನ್ಯಾಸಗಳು ಸಿದ್ಧವಾಗುತ್ತಿದ್ದು, ಇದುವೆ ತಂತ್ರಜ್ಞಾನದ ಶಕ್ತಿಯಾಗಿದೆ ಎಂದು ಹೇಳಿದರು.

****************

ಬೆಂಗಳೂರಿನಲ್ಲಿ ನಡೆಯುತ್ತಿರುವ ಹೂಡಿಕೆದಾರರ ಸಮಾವೇಶದಲ್ಲಿ ಟಿ.ವಿ.ಎಸ್ ಮೋಟಾರ್ಸ್ ವ್ಯವಸ್ಥಾಪಕ ನಿರ್ದೇಶಕ ಸುದರ್ಶನ ವೇಣು ಕರ್ನಾಟಕದಲ್ಲಿ ಮುಂದಿನ ಐದು ವರ್ಷಗಳಲ್ಲಿ 2 ಸಾವಿರ ಕೋಟಿ ರೂಪಾಯಿ ಬಂಡವಾಳ ಹೂಡಲು ನಿರ್ಧರಿಸಿದ್ದಾರೆ.

ಜಾಗತಿಕ ಸಂಶೋಧನಾ ಕೇಂದ್ರ, ಹಸಿರು ಹಾಗೂ ವೇಗದ ವಾಹನ ತಯಾರಿಕೆಗೆ ಒತ್ತು ನೀಡಲು ನಿರ್ಧರಿಸಲಾಗಿದೆ. ಮೈಸೂರಿನಲ್ಲಿ ಜಾಗತಿಕ ಸಾಮರ್ಥ್ಯ ಕೇಂದ್ರ ತೆರೆಯಲಿದ್ದು, ಉತ್ಪಾದನೆ ಹಾಗೂ ಇಂಜಿನಿಯರಿಂಗ್ ಸಾಮರ್ಥ್ಯವನ್ನು ಹೆಚ್ಚಿಸಲಿದೆ.

ಉದ್ಯಮಿಗಳಾದ ಆನಂದ್ ಮಹೀಂದ್ರ 40 ಸಾವಿರ ಕೋಟಿ ರೂಪಾಯಿ, ಸಜ್ಜನ್ ಜಿಂದಾಲ್ 56 ಸಾವಿರ ಕೋಟಿ ರೂಪಾಯಿ ಹೂಡಿಕೆಯ ಘೋಷಣೆ ಮಾಡಿದ್ದಾರೆ. ಸೌರ ಯೋಜನೆ, ಗಾಳಿ ಶಕ್ತಿ ಯೋಜನೆಗಳು, ಬ್ಯಾಟರಿ ಶಕ್ತಿ ಸಂಗ್ರಹಣೆ, ಬ್ಲೇಡ್ ತಯಾರಿಕೆ ಮತ್ತು ವಿಂಡ್ ಟರ್ಬೈನ್ ಜನರೇಟರ್ ಸ್ಥಾವರ ಸ್ಥಾಪನೆಗೆ 56 ಸಾವಿರ ಕೋಟಿ ರೂಪಾಯಿ ಹೂಡಿಕೆ ಕುರಿತಂತೆ ಸರ್ಕಾರದ ಜೊತೆ ಒಡಂಬಡಿಕೆ ಮಾಡಿಕೊಂಡಿದೆ.

ಜಿಮ್ ಸಮಾವೇಶದ ಎರಡನೇ ದಿನವಾದ ಇಂದು ಕೃತಕ ಬುದ್ಧಿಮತ್ತೆ ಮತ್ತು ಸೈಬರ್ ಭದ್ರತೆ ಕುರಿತಂತೆ ಅಮೆರಿಕಾದ ಇಂಧನ ಮತ್ತು ಮಾಹಿತಿ ತಂತ್ರಜ್ಞಾನದ ಮಾಜಿ ಅಧಿಕಾರಿ ಆನ್ ಡಂಕಿ ಸಂವಾದ ನಡೆಸಿದ್ದಾರೆ.

****************

ಮುಖ್ಯಮಂತ್ರಿ ಸಿದ್ದರಾಮಯ್ಯ ಬೆಂಗಳೂರಿನಲ್ಲಿಂದು ಅವರ ಕಾವೇರಿ ನಿವಾಸದಲ್ಲಿ ದೇಶ ವಿದೇಶಗಳ ಹಲವು ಉದ್ಯಮಿಗಳು ಹಾಗೂ ರಾಯಭಾರಿಗಳನ್ನು ಭೇಟಿಯಾಗಿ ರಾಜ್ಯದಲ್ಲಿ ಬಂಡವಾಳ ಹೂಡಿಕೆ ಕುರಿತಂತೆ ಚರ್ಚೆ ನಡೆಸುತ್ತಿದ್ದಾರೆ.

ಜಪಾನ್ ದೇಶದ ಭಾರತದ ರಾಯಬಾರಿ ಕೀಚಿ ಒನೊ ಅವರು ಇಂದು ಮುಖ್ಯಮಂತ್ರಿ ಅವರನ್ನು ಭೇಟಿಯಾಗಿ ಚರ್ಚಿಸಿದ್ದಾರೆ. ಬಳಿಕ ಇಟಲಿಯ ಭಾರತದ ರಾಯಬಾರಿ ಆಂಟೋನಿಯೊ ಎಂಡ್ರಿಕೊ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಭೇಟಿಯಾಗಿ ಮಾತುಕತೆ ನಡೆಸಿದ್ದಾರೆ.

****************

ಬೆಂಗಳೂರು ಸಮೀಪ 2ನೇ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣ ಸ್ಥಾಪನೆಗೆ ಮುಂದಿನ ಎರಡು ದಿನಗಳಲ್ಲಿ ಸ್ಥಳವನ್ನು ಘೋಷಿಸಲಾಗುವುದು ಎಂದು ಉಪ ಮುಖ್ಯಮಂತ್ರಿಗಳಾದ ಡಿ.ಕೆ.ಶಿವಕುಮಾರ್ ಅವರು ತಿಳಿಸಿದ್ದಾರೆ.

ವಿಮಾನ ನಿಲ್ದಾಣ ಸ್ಥಾಪನೆಗೆ ಹಲವು ಪ್ರದೇಶಗಳ ಪ್ರಸ್ತಾವ ಬಂದಿತ್ತು. ಅವುಗಳನ್ನು ಕೂಲಂಕುಶವಾಗಿ ಪರಿಶೀಲಿಸಲಾಗಿದೆ. ಮುಂದಿನ ದಶಕಗಳಲ್ಲಿ ಆಗುವ ಬೆಳವಣಿಗೆ, ಸಂಚಾರ ಮತ್ತು ವಿಮಾನ ಹಾರಾಟ ದಟ್ಟಣೆಯನ್ನು ಗಮನದಲ್ಲಿರಿಸಿಕೊಂಡು ಸ್ಥಳ ಆಯ್ಕೆ ಮಾಡಲಾಗಿದೆ ಎಂದು ಅವರು ತಿಳಿಸಿದ್ದಾರೆ.

****************

ಬೆಂಗಳೂರಿನ ಯಲಹಂಕ ವಾಯುನೆಲೆಯಲ್ಲಿ ನಡೆಯುತ್ತಿರುವ ಏರೋ ಇಂಡಿಯಾ 2025 ಬೃಹತ್ ವೈಮಾನಿಕ ಮೇಳ ಮೂರನೇ ದಿನವಾದ ಇಂದು ಸೂರ್ಯಕಿರಣ್ ಸೇರಿದಂತೆ ಹಲವು ವಿಶೇಷ ವಿಮಾನಗಳ ವೈಮಾನಿಕ ಪ್ರದರ್ಶನ ನಡೆಯಿತು.

ಜೊತೆಗೆ ವ್ಯಾಪಾರಕ್ಕೆ ಸಂಬಂಧಿಸಿದಂತೆ ಹಲವು ನಿಯೋಗ ಮಟ್ಟದ ಮಾತುಕತೆಗಳು ನಡೆದಿದ್ದು, ಶಸ್ತ್ರಾಸ್ತ್ರ ನಿಗಮ ನಿಯಮಿತ–ಎವಿಎನ್‌ಎಲ್ ಸ್ಟಾಲ್‌ಗೆ ಇಂದು ಅಮೆರಿಕಾದ ಪ್ರತಿಷ್ಠಿತ ರಕ್ಷಣಾ ಸಂಶೋಧನಾ ಸಂಸ್ಥೆ ಲಾಕ್ಹೀಡ್ ಮಾರ್ಟಿನ್ ನಿಯೋಗ ಭೇಟಿ ನೀಡಿತು. ಲಾಕ್ಹೀಡ್ ಮಾರ್ಟಿನ್, ಎಫ್ 35 ಯುದ್ಧ ವಿಮಾನ ಕ್ಷಿಪಣಿ, ರಕ್ಷಣಾ ವ್ಯವಸ್ಥೆಗಳು ಮತ್ತು ಬಾಹ್ಯಾಕಾಶ ತಂತ್ರಜ್ಞಾನಕ್ಕೆ ಹೆಸರುವಾಸಿಯಾಗಿದೆ.

ನಾಳೆ ಮತ್ತು ನಾಡಿದ್ದು ಸಾರ್ವಜನಿಕರ ಏರ್ ಶೋ ವೀಕ್ಷಣೆಗೆ ಅವಕಾಶ ಮಾಡಿಕೊಡಲಾಗಿದೆ.

****************

ರಾಜ್ಯದ ಉಪ ಲೋಕಾಯಕ್ತ ಬಿ.ವೀರಪ್ಪ ಅವರು ಇಂದಿನಿದ ಮೂರು ದಿನಗಳ ಕಾಲ ಹಾವೇರಿ ಜಿಲ್ಲೆಯ ಪ್ರವಾಸ ಕೈಗೊಂಡಿದ್ದಾರೆ. ಇಂದು ಹಾವೇರಿಯ ತರಕಾರಿ ಮಾರುಕಟ್ಟೆ, ಬಸ್ ನಿಲ್ದಾಣಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿ ಸಾರ್ವಜನಿಕರಿಂದ ದೂರುಗಳನ್ನು ಆಲಿಸಿದ್ದಾರೆ.

ಬ್ಯಾಡಗಿ ಕೃಷಿ ಉತ್ಪನ್ನ ಮಾರುಕಟ್ಟೆಗೆ ಭೇಟಿ ನೀಡಿ ಪರಿಶೀಲನೆ ನಡೆಸಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕೃಷಿ ಉತ್ಪನ್ನ ಮಾರುಕಟ್ಟೆಯಲ್ಲಿ ವಾರ್ಷಿಕವಾಗಿ 3 ಕೋಟಿ ರೂಪಾಯಿಗಳಿಗೂ ಅಧಿಕ ತೆರಿಗೆ ಸಂಗ್ರಹವಾಗುತ್ತಿದೆ. ಆದರೆ ಶೌಚಾಲಯ ಸೇರಿದಂತೆ ಯಾವುದೇ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದ್ದಾರೆ. ರೈತರು ಉತ್ಪನ್ನ ಮಾರಾಟ ಮಾಡಲು ಬಂದಾಗ ತೂಕದಲ್ಲಿ ವಂಚನೆ ಮಾಡುತ್ತಿರುವುದು ಗಮನಕ್ಕೆ ಬಂದಿದೆ. ಕೂಡಲೇ ಅವ್ಯವಸ್ಥೆ ಸರಿ ಪಡಿಸುವಂತೆ ಎಚ್ಚರಿಕೆ ನೀಡಿದ್ದಾರೆ.

ಎಲ್ಲಾ ಪ್ರಕರಣಗಳನ್ನು ಗಂಭೀರವಾಗಿ ಪರಿಗಣಿಸಲಾಗಿದ್ದು, ಸ್ವಯಂಪ್ರೇರಿತ ಪ್ರಕರಣ ದಾಖಲಿಸಲಾಗುವುದು ಎಂದು ತಿಳಿಸಿದ್ದಾರೆ.

****************

ಭಾರತದಲ್ಲಿ ಇದೇ ಮೊದಲ ಬಾರಿಗೆ ಹೊಸದಿಲ್ಲಿಯ ಲಾಡ್ಲೀ ಫೌಂಡೇಶನ್ ಟ್ರಸ್ಟ್ ವತಿಯಿಂದ ಪೈಲೆಟ್ ಪ್ರೊಜೆಕ್ಟ್ ನಡಿ ಹೈಟೆಕ್ ಮಾದರಿಯಲ್ಲಿ ವಿಜಯಪುರ ಜಿಲ್ಲೆಯ ಸರ್ಕಾರಿ ಶಾಲೆಗಳು, ವಿಶ್ವವಿದ್ಯಾಲಯ, ಬಸ್ ನಿಲ್ದಾಣ, ಹಾಗೂ ತಹಶೀಲ್ದಾರ್ ಕಚೇರಿಯ ಅವರಣದಲ್ಲಿ ಶೌಚಾಲಯ ನಿರ್ಮಿಸಲಾಗಿದೆ.

ವಿಜಯಪುರ ಜಿಲ್ಲೆಯಲ್ಲಿ ಶೌಚಾಲಯ ಇಲ್ಲದ 21 ಸರ್ಕಾರಿ ಶಾಲೆಗಳನ್ನು ಆಯ್ಕೆ ಮಾಡಿಕೊಂಡು ನಿರ್ಮಿಸಲಾಗಿದೆ. ಕೃತಕ ಬುದ್ಧಿಮತ್ತೆ ತಂತ್ರಜ್ಞಾನ ಆಧಾರಿತ ಹೈಟೆಕ್ ಶೌಚಾಲಯಕ್ಕೆ 12 ರಿಂದ 13 ಲಕ್ಷದ ವರೆಗೆ ಖರ್ಚು ಮಾಡಲಾಗುತ್ತದೆ.

ಈ ಕುರಿತು ಬಸವನ ಬಾಗೇವಾಡಿ ತಹಶೀಲ್ದಾರ್ ವೈ.ಎಸ್.ಸೋಮನ ಕಟ್ಟಿ ಆಕಾಶವಾಣಿಯೊಂದಿಗೆ ಮಾಹಿತಿ ಹಂಚಿಕೊಂಡಿದ್ದಾರೆ.

ಧ್ವನಿ: ವೈ.ಎಸ್.ಸೋಮನ ಕಟ್ಟಿ

****************

**2025ರ ಮಾರ್ಚ 1 ಮತ್ತು 2 ರಂದು ಗದಗ ನಗರದಲ್ಲಿ ಬೃಹತ್ ಉದ್ಯೋಗ ಮೇಳ ಜರುಗಲಿದೆ ಎಂದು ಗದಗ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ.ಪಾಟೀಲ್ ತಿಳಿಸಿದ್ದಾರೆ.**

**ಗದಗದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಉದ್ಯೋಗ ಮೇಳದಲ್ಲಿ 50ಕ್ಕೂ ಹೆಚ್ಚು ಪ್ರತಿಷ್ಠಿತ ಕಂಪನಿಗಳು ಪಾಲ್ಗೊಳ್ಳಲಿವೆ ಎಂದು ಹೇಳಿದ್ದಾರೆ.**

**ಧ್ವನಿ: ಎಚ್.ಕೆ ಪಾಟೀಲ್**

********************

**ಟಿ.ನರಸೀಪುರದ ತ್ರಿವೇಣಿ ಸಂಗಮದಲ್ಲಿ ನಿನ್ನೆ ತಡರಾತ್ರಿ ಉಪ ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಪುಣ್ಯ ಸ್ನಾನ ಮಾಡಿದ್ದಾರೆ. ಮೈಸೂರಿನಲ್ಲಿ ಇಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ತ್ರಿವೇಣಿ ಸಂಗಮದಲ್ಲಿ ಪುಣ್ಯ ಸ್ನಾನ ಮಾಡಿದ್ದು, ಪ್ರಯಾಗ್ ರಾಜ್‌ನಲ್ಲಿ ಮಾಡಿದ್ದಷ್ಟೇ ಸಂತಸವಾಗಿದೆ ಎಂದು ಹೇಳಿದ್ದಾರೆ. ಈ ಬಾರಿ ಬಜೆಟ್ ನಲ್ಲಿ ತ್ರಿವೇಣಿ ಸಂಗಮ ಅಭಿವೃದ್ಧಿಗೆ ಹಣ ಮೀಸಲಿಡಲಾಗುವುದು ಎಂದು ಸ್ಪಷ್ಟಪಡಿಸಿದ್ದಾರೆ.**

**********ಮುಕ್ತಾಯ**********